ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**24.06.2025** **1.10 p.m.**

**<><><><>**

ಮುಖ್ಯಾಂಶಗಳು

1. ಆಧ್ಯಾತ್ಮಿಕ ನಾಯಕ ನಾರಾಯಣ ಗುರು - ಮಹಾತ್ಮ ಗಾಂಧೀಜಿ ಐತಿಹಾಸಿಕ ಸಂಭಾಷಣೆಯ ಶತಮಾನೋತ್ಸವ ಆಚರಣೆಗೆ ಪ್ರಧಾನಿ ಚಾಲನೆ
2. ಆಪರೇಷನ್ ಸಿಂಧು: ಇರಾನ್‌ನಿಂದ ಸ್ವದೇಶಕ್ಕೆ ಮರಳಿದ ೨ ಸಾವಿರದ ೨೯೫ ಭಾರತೀಯ ಪ್ರಜೆಗಳು
3. ನಾಳೆ ನಡೆಯಲಿರುವ ಶಾಂಘೈ ಸಹಕಾರ ಸಂಘಟನೆಯ ಸಭೆಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಭಾಗಿ
4. ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ನಾಳೆ ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲ ಪಯಣ

<><><><>

ಭಾರತದ ಇಬ್ಬರು ಶ್ರೇಷ್ಠ ಆಧ್ಯಾತ್ಮಿಕ ನಾಯಕರಾದ ನಾರಾಯಣ ಗುರು ಮತ್ತು ಮಹಾತ್ಮ ಗಾಂಧೀಜಿಯವರ ನಡುವಿನ ಐತಿಹಾಸಿಕ ಸಂಭಾಷಣೆಯ ಶತಮಾನೋತ್ಸವ ಆಚರಣೆಗೆ ಪ್ರಧಾನಿ ನರೇಂದ್ರ ಮೋದಿ ನವದೆಹಲಿಯಲ್ಲಿ ಇಂದು ಚಾಲನೆ ನೀಡಿದರು. ಸಮಾರಂಭ ಉದ್ದೇಶಿಸಿ ಮಾತನಾಡಿದ ಪ್ರಧಾನಿ, ನೂರು ವರ್ಷಗಳ ಹಿಂದೆ ನಡೆದ ಈ ಸಭೆಯು ಸಾಮಾಜಿಕ ಸಾಮರಸ್ಯ ಮತ್ತು ವಿಕಸಿತ ಭಾರತದ ಸಾಮೂಹಿಕ ಗುರಿಗೆ ಸ್ಫೂರ್ತಿಯ ಮೂಲವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

**ಧ್ವನಿ: ಪ್ರಧಾನಿ (೨೭ ಸೆಕೆಂಡ್‌ಗಳು)**

ಈ ಐತಿಹಾಸಿಕ ಸಂಭಾಷಣೆಯು ೧೯೨೫ ರ ಮಾರ್ಚ್ ೧೨ ರಂದು ಮಹಾತ್ಮ ಗಾಂಧಿಯವರ ಭೇಟಿಯ ಸಮಯದಲ್ಲಿ ಶಿವಗಿರಿ ಮಠದಲ್ಲಿ ನಡೆಯಿತು. ಇದು ವೈಕಂ ಸತ್ಯಾಗ್ರಹ, ಧಾರ್ಮಿಕ ಮತಾಂತರ, ಅಹಿಂಸೆ, ಅಸ್ಪೃಶ್ಯತೆಯ ನಿರ್ಮೂಲನೆ, ದೀನ-ದಲಿತರ ಉನ್ನತಿ ಸೇರಿದಂತೆ ಇತರೆ ವಿಷಯಗಳ ಸುತ್ತ ಕೇಂದ್ರೀಕೃತವಾಗಿತ್ತು.

<><><><>

ಇರಾನ್ ಮತ್ತು ಇಸ್ರೇಲ್ ಸಂಪೂರ್ಣ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ಆದರೆ ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ, ಇಸ್ರೇಲ್‌ನೊಂದಿಗೆ ಕದನ ವಿರಾಮದ ಕುರಿತು ಯಾವುದೇ ಒಪ್ಪಂದವನ್ನು ನಿರಾಕರಿಸಿದ್ದಾರೆ. ಕತಾರ್‌ನಲ್ಲಿರುವ ಅಮೆರಿಕದ ವಾಯುನೆಲೆಯ ಮೇಲೆ ಇರಾನಿನ ಕ್ಷಿಪಣಿ ದಾಳಿಯ ಸ್ವಲ್ಪ ಸಮಯದ ನಂತರ, ನಿನ್ನೆ ರಾತ್ರಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಕದನ ವಿರಾಮದ ಬಗ್ಗೆ ತಿಳಿಸಿದ್ದಾರೆ.ಎರಡೂ ದೇಶಗಳು ತಮ್ಮ ಅಂತಿಮ ಕಾರ್ಯಾಚರಣೆಗಳನ್ನು ಪೂರ್ಣಗೊಳಿಸಿದ ನಂತರ ಕದನ ವಿರಾಮ ಪ್ರಾರಂಭವಾಗುತ್ತದೆ. ಕದನ ವಿರಾಮವನ್ನು ಹಂತ-ಹಂತವಾಗಿ ಜಾರಿಗೆ ತರಲಾಗುವುದು. ೧೨ ದಿನಗಳ ಯುದ್ಧದ ಅಧಿಕೃತ ಅಂತ್ಯವನ್ನು ವಿಶ್ವವು ಸ್ವಾಗತಿಸುತ್ತದೆ ಎಂದು ಸಾಮಾಜಿಕ ಜಾಲತಾಣದ ಮೂಲಕ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಏತನ್ಮಧ್ಯೆ, ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಇರಾನ್‌ನ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ, ಮಿಲಿಟರಿ ಕಾರ್ಯಾಚರಣೆಗಳನ್ನು ನಿಲ್ಲಿಸುವ ಬಗ್ಗೆ ಅಂತಿಮ ನಿರ್ಧಾರವನ್ನು ನಂತರ ತೆಗೆದುಕೊಳ್ಳಲಾಗುವುದು ಎಂದು ಹೇಳಿದ್ದಾರೆ. ಇಸ್ರೇಲ್ ಆಡಳಿತವು ಇರಾನಿನ ಜನರ ವಿರುದ್ಧ ತನ್ನ ಕಾನೂನುಬಾಹಿರ ಆಕ್ರಮಣವನ್ನು ನಿಲ್ಲಿಸಿದರೆ, ಇರಾನ್ ತನ್ನ ಪ್ರತಿಕ್ರಿಯೆಯನ್ನು ಮುಂದುವರಿಸುವ ಉದ್ದೇಶ ಹೊಂದಿಲ್ಲ ಎಂದು ಸಚಿವ ಅಬ್ಬಾಸ್ ಅರಘ್ಚಿ ತಿಳಿಸಿದ್ದಾರೆ.

<><><><>

ಆಪರೇಷನ್ ಸಿಂಧು ಅಡಿಯಲ್ಲಿ ಇಲ್ಲಿಯವರಗೆ ಎರಡು ಸಾವಿರದ ೨೯೫ ಭಾರತೀಯ ಪ್ರಜೆಗಳನ್ನು ಇರಾನ್‌ನಿಂದ ಸ್ವದೇಶಕ್ಕೆ ಕರೆತರಲಾಗಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ. ಇರಾನ್‌ನಿಂದ ಸ್ಥಳಾಂತರಿಸಲಾದ ೨೯೨ ಭಾರತೀಯ ಪ್ರಜೆಗಳು ಇಂದು ಬೆಳಗಿನ ಜಾವ ವಿಶೇಷ ವಿಮಾನದಲ್ಲಿ ಮಸಾದ್‌ನಿಂದ ನವದೆಹಲಿಗೆ ಆಗಮಿಸಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ. ಇನ್ನೊಂದೆಡೆ, ಭಾರತೀಯ ಪ್ರಜೆಗಳನ್ನು ಸ್ಥಳಾಂತರಿಸಲು ಜೋರ್ಡಾನ್ ಮತ್ತು ಈಜಿಪ್ಟ್‌ನಿಂದ ಕಾರ್ಯಾಚರಣೆಗಳನ್ನು ಪ್ರಾರಂಭಿಸಿದೆ. ಆಪರೇಷನ್ ಸಿಂಧು ಅಡಿಯಲ್ಲಿ ಭಾರತೀಯ ವಾಯುಪಡೆಯ ಸಿ-೧೭ ವಿಮಾನವು ೧೬೫ ಭಾರತೀಯ ಪ್ರಜೆಗಳನ್ನು ಸ್ಥಳಾಂತರಿಸಿತು. ವಿಮಾನವು ಇಂದು ಬೆಳಗ್ಗೆ ಜೋರ್ಡಾನ್‌ನ ಅಮನ್‌ನಿಂದ ನವದೆಹಲಿಗೆ ಬಂದಿಳಿಯಿತು. ಅವರನ್ನು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ

ರಾಜ್ಯ ಸಚಿವ ಡಾ. ಎಲ್.ಮುರುಗನ್ ಬರಮಾಡಿಕೊಂಡರು. ಇದೇ ವೇಳೆ, ಇಸ್ರೇಲ್‌ನಿಂದ ೧೬೧ ಭಾರತೀಯ ಪ್ರಜೆಗಳ ಮತ್ತೊಂದು ತಂಡ ಇಂದು ನವದೆಹಲಿ ತಲುಪಿತು. ವಿಮಾನ ನಿಲ್ದಾಣದಲ್ಲಿ ಅವರನ್ನು ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವೆ ಪಬಿತ್ರಾ ಮಾರ್ಗರಿಟಾ ಬರಮಾಡಿಕೊಂಡರು.

<><><>

ನಾಳೆ ಸಂವಿಧಾನ ಹತ್ಯಾ ದಿನ ಆಚರಿಸಲಾಗುತ್ತಿದೆ. ೧೯೭೫ರ ಜೂನ್ ೨೫ರಂದು ತುರ್ತು ಪರಿಸ್ಥಿತಿ ಘೋಷಿಸಲಾಯಿತು. ತುರ್ತು ಪರಿಸ್ಥಿತಿಯಿಂದ ಬಳಲಿದ ಪ್ರತಿಯೊಬ್ಬ ವ್ಯಕ್ತಿಗೂ ಇದು ಗೌರವ ಸಲ್ಲಿಸುವ ದಿನವಾಗಿದೆ. ಇದು ಭಾರತೀಯ ಇತಿಹಾಸದ ಕರಾಳ ಹಂತವಾಗಿದೆ. ೧೯೭೫ ರ ತುರ್ತು ಪರಿಸ್ಥಿತಿಯ ಅಮಾನವೀಯ ನೋವುಗಳನ್ನು ಸಹಿಸಿಕೊಂಡ ಎಲ್ಲರ ಕೊಡುಗೆಗಳನ್ನು ಈ ದಿನ ಸ್ಮರಿಸುತ್ತದೆ. ಈ ಕುರಿತು ಒಂದು ವಿಶೇಷ ವರದಿ.

**ಧ್ವನಿ: ವಿಶೇಷ ವರದಿ (ಚೇತನ್ )**

ತುರ್ತು ಪರಿಸ್ಥಿತಿಯ ಸಮಯದಲ್ಲಿ ಅಧಿಕಾರದ ದುರುಪಯೋಗದ ವಿರುದ್ಧ ಹೋರಾಡಿದ ಮತ್ತು ಇದರಿಂದ ಬಳಲಿದ ಎಲ್ಲರಿಗೂ ಗೌರವ ಸಲ್ಲಿಸಲು ಮತ್ತು ಭವಿಷ್ಯದಲ್ಲಿ ಅಂತಹ ಅಧಿಕಾರದ ದುರುಪಯೋಗವನ್ನು ಯಾವುದೇ ರೀತಿಯಲ್ಲಿ ಬೆಂಬಲಿಸದಂತೆ ದೇಶದ ಜನರಲ್ಲಿ ಜಾಗೃತಿ ಮೂಡಿಸಲು ಕೇಂದ್ರ ಸರ್ಕಾರ ಕಳೆದ ವರ್ಷ ಜೂನ್ ೨೫ ಅನ್ನು ಸಂವಿಧಾನ ಹತ್ಯಾ ದಿವಸ್ ಎಂದು ಘೋಷಿಸಿದೆ. ೧೯೭೫ರ ಜೂನ್ ೨೫ ರಂದು, ಸರ್ವಾಧಿಕಾರಿ ಮನಸ್ಥಿತಿಯಿಂದ ಅಂದಿನ ಇಂದಿರಾ ಗಾಂಧಿ ಸರ್ಕಾರವು ೧೮ ತಿಂಗಳ ಕಾಲ ರಾಷ್ಟ್ರದ ಮೇಲೆ ತುರ್ತು ಪರಿಸ್ಥಿತಿ ಹೇರಿತ್ತು. ಲಕ್ಷಾಂತರ ಜನರನ್ನು ತಮ್ಮದಲ್ಲದ ತಪ್ಪಿಗೆ ಜೈಲಿಗೆ ಹಾಕಲಾಯಿತು ಮತ್ತು ಮಾಧ್ಯಮಗಳ ಧ್ವನಿಯನ್ನು ಅಡಗಿಸಲಾಯಿತು. ದಬ್ಬಾಳಿಕೆಯ ಸರ್ಕಾರದಿಂದ ಕಿರುಕುಳವನ್ನು ಎದುರಿಸಿದರೂ ಪ್ರಜಾಪ್ರಭುತ್ವವನ್ನು ಪುನರುಜ್ಜೀವನಗೊಳಿಸಲು ಹೋರಾಡಿದ ಲಕ್ಷಾಂತರ ಜನರ ಚೈತನ್ಯವನ್ನು ಗೌರವಿಸುವುದು ಸಂವಿಧಾನ ಹತ್ಯಾ ದಿನದ ಉದ್ದೇಶವಾಗಿದೆ. ಈ ಆಚರಣೆಯು ಪ್ರತಿಯೊಬ್ಬ ಭಾರತೀಯನಲ್ಲೂ ವೈಯಕ್ತಿಕ ಸ್ವಾತಂತ್ರ್ಯ ಮತ್ತು ಪ್ರಜಾಪ್ರಭುತ್ವದ ಶಾಶ್ವತ ಜ್ವಾಲೆಯನ್ನು ಜೀವಂತವಾಗಿಡಲು ಸಹಾಯ ಮಾಡುತ್ತದೆ. ಹೀಗಾಗಿ ಯಾವುದೇ ಸರ್ವಾಧಿಕಾರಿ ಶಕ್ತಿಯು ಆ ಭಯಾನಕತೆಗಳನ್ನು ಪುನರಾವರ್ತಿಸದಂತೆ ತಡೆಯುತ್ತದೆ.

<><><>

ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳಲ್ಲಿ ಭಾರತೀಯ ಸೇನೆಯ ಕಾರ್ಯಾಚರಣೆಯ ಸನ್ನದ್ಧತೆಯನ್ನು ಬಲಪಡಿಸುವ ಮಹತ್ವದ ಕ್ರಮದಲ್ಲಿ, ತುರ್ತು ಖರೀದಿ ಕಾರ್ಯವಿಧಾನದ ಅಡಿಯಲ್ಲಿ ಒಂದು ಸಾವಿರದ ೯೮೧ ಕೋಟಿ ರೂಪಾಯಿ ಮೌಲ್ಯದ ಹದಿಮೂರು ಒಪ್ಪಂದಗಳನ್ನು ರಕ್ಷಣಾ ಸಚಿವಾಲಯ ಅಂಗೀಕರಿಸಿದೆ. ಖರೀದಿಸಲಾಗುತ್ತಿರುವ ಉಪಕರಣಗಳಲ್ಲಿ ಇಂಟೆಗ್ರೇಟೆಡ್ ಡ್ರೋನ್ ಡಿಟೆಕ್ಷನ್ ಸಿಸ್ಟಮ್, ಲೋ ಲೆವೆಲ್ ಲೈಟ್‌ವೇಟ್ ರಾಡಾರ್‌ಗಳು, ವೆರಿ ಶಾರ್ಟ್ ರೇಂಜ್ ಏರ್ ಡಿಫೆನ್ಸ್ ಸಿಸ್ಟಮ್ಸ್ ಲಾಂಚರ್‌ಗಳು ಮತ್ತು ಕ್ಷಿಪಣಿಗಳು, ಬುಲೆಟ್ ಪ್ರೂಫ್ ಜಾಕೆಟ್‌ಗಳು ಸೇರಿವೆ.

<><><>

ಚೀನಾದ ಕ್ವಿಂಗ್ಡಾವೊದಲ್ಲಿ ನಾಳೆ ಆರಂಭವಾಗಲಿರುವ ಶಾಂಘೈ ಸಹಕಾರ ಸಂಘಟನೆ-ಎಸ್‌ಸಿಒ ರಕ್ಷಣಾ ಸಚಿವರ ಸಭೆಯಲ್ಲಿ ಉನ್ನತ ಮಟ್ಟದ ಭಾರತೀಯ ನಿಯೋಗದ ನೇತೃತ್ವವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ವಹಿಸಲಿದ್ದಾರೆ. ಎರಡು ದಿನಗಳ ಸಭೆಯಲ್ಲಿ, ಎಸ್‌ಸಿಒ ಸದಸ್ಯ ರಾಷ್ಟ್ರಗಳ ರಕ್ಷಣಾ ಸಚಿವರು, ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ಭದ್ರತೆ, ಭಯೋತ್ಪಾದನಾ ನಿಗ್ರಹ ಪ್ರಯತ್ನಗಳು ಮತ್ತು ರಕ್ಷಣಾ ಸಚಿವಾಲಯಗಳ ನಡುವಿನ ವರ್ಧಿತ ಸಹಕಾರ ಸೇರಿದಂತೆ ಪ್ರಮುಖ ವಿಷಯಗಳ ಬಗ್ಗೆ ಚರ್ಚಿಸುವ ನಿರೀಕ್ಷೆಯಿದೆ. ಸಭೆಯ ಹೊರತಾಗಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಚೀನಾ, ರಷ್ಯಾ ಸೇರಿದಂತೆ ಹಲವಾರು ದೇಶಗಳ ರಕ್ಷಣಾ ಸಚಿವರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ.

<><><>

ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ನಾಳೆ ಅಮೆರಿಕದ ಫ್ಲೋರಿಡಾದಲ್ಲಿರುವ ನಾಸಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಯಾನ ಆರಂಭಿಸಲಿದ್ದಾರೆ. ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಐತಿಹಾಸಿಕ ಹಾರಾಟದ ಯಾನ ಹಲವು ಬಾರಿ ಮುಂದೂಡಲ್ಪಟ್ಟ ನಂತರ, ಇಂದು ನಾಸಾ ಹೊಸ ದಿನಾಂಕವನ್ನು ಘೋಷಿಸಿದೆ.

<><><>

ಸೇವಾ, ಸುಶಾಸನ್ ಮತ್ತು ಗರೀಬ್ ಕಲ್ಯಾಣ್-ಆಡಳಿತದ ಮೂರು ಪ್ರಮುಖ ಸ್ತಂಭಗಳಾಗಿದ್ದು, ಇದು ವಿಕಸಿತ ಭಾರತಕ್ಕೆ ಕಾರಣವಾಗುತ್ತದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ಇಂದು ೧೩ನೇ ಪಾಸ್‌ಪೋರ್ಟ್ ಸೇವಾ ದಿವಸದ ಹಿನ್ನೆಲೆಯಲ್ಲಿ ಮಾತನಾಡಿರುವ

ಅವರು, ದೇಶದಲ್ಲಿ ಪಾಸ್‌ಪೋರ್ಟ್ ವಿತರಣಾ ವ್ಯವಸ್ಥೆಯಲ್ಲಿ ಗಮನಾರ್ಹ ಸುಧಾರಣೆ ಕಂಡುಬಂದಿದೆ ಎಂದರು. ಉನ್ನತ ಮಟ್ಟದ ಉದಯೋನ್ಮುಖ ತಂತ್ರಜ್ಞಾನಗಳನ್ನು ಬಳಸಿಕೊಳ್ಳುವ ಪಾಸ್‌ಪೋರ್ಟ್ ಸೇವಾ ಕಾರ್ಯಕ್ರಮ ಆವೃತ್ತಿ ೨.೦ ಅನ್ನು ದೇಶಾದ್ಯಂತ ಜಾರಿಗೆ ತರಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು. ಪ್ರಸ್ತುತ ಗ್ಲೋಬಲ್ ಪಾಸ್‌ಪೋರ್ಟ್ ಸೇವಾ ಕಾರ್ಯಕ್ರಮ ಆವೃತ್ತಿ ೨.೦ ರ ಮಾದರಿ ಅನುಷ್ಠಾನವು ಪ್ರಗತಿಯಲ್ಲಿದೆ. ಎಲ್ಲಾ ಭಾರತೀಯ ರಾಯಭಾರ ಕಚೇರಿಗಳು ಮತ್ತು ಕಾನ್ಸುಲೇಟ್‌ಗಳಲ್ಲಿ ಹಂತ-ಹಂತವಾಗಿ ಇದನ್ನು ಜಾರಿಗೆ ತರಲಾಗುವುದು ಎಂದು ಅವರು ತಿಳಿಸಿದರು.

<><><><>

ಏಕೀಕೃತ ಪಿಂಚಣಿ ಯೋಜನೆ ಆಯ್ಕೆ ಮಾಡಲು ಇರುವ ಕೊನೆಯ ದಿನಾಂಕವನ್ನು ಈ ವರ್ಷದ ಸೆಪ್ಟೆಂಬರ್ ೩೦ ರವರೆಗೆ ವಿಸ್ತರಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ಇದು ಅರ್ಹ ಕೇಂದ್ರ ಸರ್ಕಾರಿ ನೌಕರರು, ನಿವೃತ್ತ ಉದ್ಯೋಗಿಗಳು ಮತ್ತು ಮೃತ ನಿವೃತ್ತ ಉದ್ಯೋಗಿಗಳ ಕಾನೂನುಬದ್ಧ ವಿವಾಹಿತ ಸಂಗಾತಿಗಳಿಗೆ ಅನ್ವಯಿಸುತ್ತದೆ. ಈ ವರ್ಷದ ಜನವರಿಯಲ್ಲಿ ಹಣಕಾಸು ಸಚಿವಾಲಯವು ಅರ್ಹ ಕೇಂದ್ರ ಸರ್ಕಾರಿ ನೌಕರರಿಗೆ ಏಕೀಕೃತ ಪಿಂಚಣಿ ಯೋಜನೆಯನ್ನು ಪ್ರಕಟಿಸಿದೆ. ನಿಯಮಗಳ ಪ್ರಕಾರ, ಅರ್ಹ ಸರ್ಕಾರಿ ನೌಕರರಿಗೆ ರಾಷ್ಟ್ರೀಯ ಪಿಂಚಣಿ ವ್ಯವಸ್ಥೆಯಿಂದ ಏಕೀಕೃತ ಪಿಂಚಣಿ ವ್ಯವಸ್ಥೆಗೆ ವರ್ಗಾವಣೆಗೊಳ್ಳಲು ಸೆಪ್ಟೆಂಬರ್ ೩೦ ರವರೆಗೆ ಅವಕಾಶ ಕಲ್ಪಿಸಲಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>